**ಕರ್ನಾಟಕ ಸರ್ಕಾರ**

**ಕೇಂದ್ರೀಕೃತ ದಾಖಲಾತಿ ಘಟಕ, ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ,**

**ಕೆಂಪೇಗೌಡ ರಸ್ತೆ, ಬೆಂಗಳೂರು-೫೬೦ ೦೦೯.**

**ದೂರವಾಣಿ ಸಂಖ್ಯೆ: 080-22228805, 22483140, 22483145 ಇ-ಮೇಲ್ ವಿಳಾಸ: cackarnataka1@gmail.com**

---

ಸಂ. ಸಿಎಸಿ-5/ಸಾಕೋಸಿದಾಪ್ರ/3/2025-26 ದಿನಾಂಕ: 12/11/2025

**ಪ್ರಕಟಣೆ**

2025ನೇ ಸಾಲಿನ ಬಿ. ಇಡಿ. ದಾಖಲಾತಿ ಸಂಬಂಧ ಅರ್ಜಿ ಸಲ್ಲಿಸಲು ಅಧಿಸೂಚನೆಯನ್ನು ಹೊರಡಿಸಲಾಗಿದ್ದು, ದಿನಾಂಕ:03/10/2025 ರಿಂದ ದಿನಾಂಕ: 03/11/2025ರವರೆಗೆ ಅರ್ಜಿ ಸಲ್ಲಿಸಿ ದಾಖಲೆಗಳನ್ನು ನೋಡಲ್ ಕೇಂದ್ರಗಳಲ್ಲಿ ಪರಿಶೀಲಿಸಿಕೊಳ್ಳಲು ಸೂಚಿಸಲಾಗಿತ್ತು. ಅದರಂತೆ ಅರ್ಜಿ ಸಲ್ಲಿಸಿದವರಲ್ಲಿ 28976 ಅರ್ಹ ಮತ್ತು 6793 ಆಕ್ಷೇಪಿತ ಅಭ್ಯರ್ಥಿಗಳ ಪಟ್ಟಿಯನ್ನು https://schooleducation.karnataka.gov.in/ ರಲ್ಲಿ ಪ್ರಕಟಿಸಲಾಗಿದೆ. ಇವರಲ್ಲಿ 6174 ಮಂದಿ ಅಭ್ಯರ್ಥಿಗಳು ಪತ್ರಿಕಾ ಪ್ರಕಟಣೆ ನೀಡಿದರೂ, ನೋಡಲ್ ಕೇಂದ್ರದವರು ಫೋನು ಮೂಲಕ ಸಂಪರ್ಕಿಸಿ ತಿಳಿಸಿ ಹೇಳಿದರೂ ಸಹಾ ದಾಖಲೆಗಳ ಪರಿಶೀಲನೆಯನ್ನು ಮಾಡಿಸಿಕೊಂಡಿರುವುದಿಲ್ಲ. ಆದರೂ ಇವರಿಗೆ ದಾಖಲೆಗಳನ್ನು ಪರಿಶೀಲಿಸಿಕೊಂಡು ಅಪ್‌ಡೇಟ್ ಮಾಡಿಸಿಕೊಳ್ಳಲು ಇನ್ನೊಂದು ಅವಕಾಶವನ್ನು ನೀಡಿ ಈ ಮೂಲಕ ಅಂತಿಮ ಸೂಚನೆಯನ್ನು ನೀಡಲಾಗಿದೆ.

ಈ ಎರಡೂ ಪಟ್ಟಿಗಳಲ್ಲಿರುವ ಪ್ರತಿಯೊಬ್ಬ ಅಭ್ಯರ್ಥಿಯೂ ಪಟ್ಟಿಯಲ್ಲಿ ನೀಡಲಾಗಿರುವ ಕೋಡ್ ಸಂಖ್ಯೆಯನುಸಾರ ಈ ಪಟ್ಟಿಯನ್ನು ಪುನಃ ಪರಿಶೀಲಿಸಿಕೊಳ್ಳತಕ್ಕದ್ದು ಮತ್ತು ಅದರಲ್ಲಿ ಯಾವುದೇ ತಪ್ಪು ಅಥವಾ ದೋಷ **ಇದ್ದರೆ ದಿನಾಂಕ: 15/11/2025ರೊಳಗೆ ಸಂಬಂಧಿತ ನೋಡಲ್ ಕೇಂದ್ರಕ್ಕೆ ಎಲ್ಲಾ ಮೂಲ ದಾಖಲೆಗಳೊಂದಿಗೆ ಹಾಜರಾಗಿ ಸರಿಪಡಿಸಿಕೊಳ್ಳತಕ್ಕದ್ದು**. ಈ ದಿನಾಂಕದ ನಂತರ ಯಾವುದೇ ತಿದ್ದುಪಡಿಯನ್ನು ಮಾಡಲಾಗುವುದಿಲ್ಲ. ಮೂಲ ದಾಖಲೆಗಳನ್ನು ಪರಿಶೀಲಿಸಿಕೊಳ್ಳದ ಹಾಗೂ ಅಗತ್ಯ ತಿದ್ದುಪಡಿಯನ್ನು ಮಾಡಿಸಿಕೊಳ್ಳದ ಆಕ್ಷೇಪಿತ/ಅನರ್ಹ ಅಭ್ಯರ್ಥಿಗಳನ್ನು ಕೈಬಿಟ್ಟು ಉಳಿದವರ ಅಂತಿಮ ಆಯ್ಕೆ ಪಟ್ಟಿಯನ್ನು ಮಾಡಿ ಕಾಲೇಜುಗಳ ಹಂಚಿಕೆಯನ್ನು ಮಾಡಲಾಗುವುದು ಎಂದು ಅಂತಿಮ ಕರೆಯನ್ನು ಅಭ್ಯರ್ಥಿಗಳಿಗೆ ನೀಡಲಾಗಿದೆ.

ಹಾಗೆಯೇ, ಅಭ್ಯರ್ಥಿಗಳು ಈಗಾಗಲೇ ತಮಗೆ ಬೇಕಾಗುವ ಕಾಲೇಜುಗಳ ಆಯ್ಕೆಯನ್ನು ಮಾಡಿದ್ದು, ಅದರಲ್ಲಿ ಏನಾದರೂ ಬದಲಾವಣೆಯನ್ನು ಮಾಡ ಬಯಸಿದರೆ ಆನ್ ಲೈನ್ ಮೂಲಕ ಲಾಗ್ ಇನ್ ಆಗಿ ದಿನಾಂಕ : 15/11/2025ರೊಳಗೆ ಮಾಡಿಕೊಳ್ಳುವಂತೆಯೂ ಸೂಚಿಸಲಾಗಿದೆ.

ಜಂಟಿ ನಿರ್ದೇಶಕರು
ಕೇಂದ್ರೀಕೃತ ದಾಖಲಾತಿ ಘಟಕ, ಬೆಂಗಳೂರು